ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: : 2035

ಉತ್ತರ ದಿನಾಂಕ : 27.03.2020

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ಕೇಂದ್ರ ಸರ್ಕಾರದ ಜಲಜೀವನ್ ಅಭಿಯಾನ ಅಡಿಯಲ್ಲಿ ಆಯ್ಕೆ ಮಾಡಿರುವ ಪ್ರದೇಶಗಳು ಯಾವುವು; (ಪೂರ್ಣ ವಿವರ ನೀಡುವುದು)	ಜಲಜೀವನ್ ಮಿಷನ್ ಅಭಿಯಾನದಡಿಯಲ್ಲಿ ಇಂತಹದೇ ಪ್ರದೇಶವೆಂದು ಆಯ್ಕೆಯಾಗಿರುವುದಿಲ್ಲ. ಆದರೆ ರಾಜ್ಯದಲ್ಲಿ ಈ ಹಿಂದೆ NRDWP ಯೋಜನೆಯಡಿಯಲ್ಲಿ ನಿರ್ಮಾಣ ಮಾಡಿ ಸುಸ್ಥಿರವಾಗಿ ನಡೆಯುತ್ತಿರುವ ಬಹುಗ್ರಾಮ ಯೋಜನೆಗಳ ವ್ಯಾಪ್ತಿಯ ಮನೆಗಳನ್ನು ಪ್ರಥಮ ಹಂತದಲ್ಲಿ ಪರಿಗಣಿಸಲಾಗುತ್ತಿದೆ.
ಆ.	ರಾಜ್ಯ ಸರ್ಕಾರ ಈ ಜಲಜೀವನ್ ಅಭಿಯಾನ ಅಡಿ ಇದುವರೆಗೂ ಕೇಂದ್ರ ಸರ್ಕಾರದಿಂದ ಪಡೆದಿರುವ ಅನುದಾನವೆಷ್ಟು; (ಪೂರ್ಣ ವಿವರ ನೀಡುವುದು)	ಜಲಜೀವನ್ ಮಿಷನ್ ಅಭಿಯಾನ ಪ್ರಸಕ್ತ ಸಾಲಿನ ಮಧ್ಯಕಾಲದಿಂದ ಪ್ರಾರಂಭವಾಗಿದೆ. ಇದರಡಿ ಈವರೆಗೆ ರೂ.323.71ಕೋಟಿ ಅನುದಾನ ಬಿಡುಗಡೆಯಾಗಿದೆ.
ಇ.	ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವಾಗಲೀ ಅಥವಾ ರಾಜ್ಯ ಸರ್ಕಾರವಾಗಲೀ ನಿಗಧಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಗಳೇನು ಮತ್ತು ಇವುಗಳನ್ನು ಎಷ್ಟರ ಮಟ್ಟಿಗೆ ಸಾಧಿಸಲಾಗಿದೆ? (ಪೂರ್ಣ ಮಹಿತಿ ನೀಡುವುದು)	ಕೇಂದ್ರ ಸರ್ಕಾರ ರೂಪಿಸಿರುವ ಜಲಜೀವನ್ ಮಿಷನ್ ಪ್ರಕಾರ ರಾಜ್ಯದ ಎಲ್ಲಾ ಗ್ರಾಮೀಣ ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ ಒದಗಿಸಿ ನಿಗಧಿತ ಪ್ರಮಾಣದ ಮತ್ತು ಗುಣಮಟ್ಟದ ನೀರನ್ನು 2024ರೊಳಗೆ ಹಂತ ಹಂತವಾಗಿ ಒದಗಿಸುವುದಾಗಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ವಿವಿಧ ಯೋಜನೆಯಡಿ ಈವರೆಗೆ 46965 ಕಾರ್ಯಾತ್ಮಕ ನಳನೀರು ಸಂಪರ್ಕ ಒದಗಿಸಲಾಗಿರುತ್ತದೆ. ಜಲಜೀವನ್ ಮಿಷನ್ ಅಭಿಯಾನದಡಿ ಈವರೆಗೆ ರೂ.323.71ಕೋಟಿ ಅನುದಾನ ಬಿಡುಗಡೆಯಾಗಿದ್ದು, ಒಟ್ಟಾರೆ ರೂ.109.82ಕೋಟಿ ವೆಚ್ಚವಾಗಿರುತ್ತದೆ

ಸಂ.ಗ್ರಾಕುನೀ&ನೈಇ/133/ಗ್ರಾನೀಸ(5)/2020

(ಕೆ. ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು